## ಶ್ರೀ ಅರುಣ ಶಹಾಪುರ, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು ಇವರು ನಿಯಮ 72 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.

**ಸೂಚನೆ:** ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ(ರಿ) ಇದರಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಾಲಾ/ಕಾಲೇಜುಗಳ ಬೋಧಕ/ ಬೋಧಕೇತರ ಸಿಬ್ಬಂದಿಗಳನ್ನು ಜ್ಯೋತಿ ಸಂಜೀವಿನಿ ಯೋಜನೆಯಡಿ ತರುವ ಕುರಿತು ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

****

**ಉತ್ತರ:-** ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿನ ವಸತಿ ಶಾಲಾ/ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ ಬೋಧಕೇತರ ಸಿಬ್ಬಂದಿಗಳಿಗೆ ಜ್ಯೋತಿ ಸಂಜೀವಿನಿ ಯೋಜನೆ ಹಾಗೂ ನಗದು ರಹಿತ ಸೌಲಭ್ಯಗಳನ್ನು ನೀಡುವ ಸಂಬಂಧ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರಿಗೆ ಪತ್ರ ವ್ಯವಹರಿಸಲಾಗಿದ್ದು, ಸದರಿಯವರು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ರವರ ಅಭಿಪ್ರಾಯ ಕೋರಿರುತ್ತಾರೆ. ಈ ಸಂಬಂಧ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಖಾಯಂ ನೌಕರರು & ಅವರ ಅವಲಂಭಿತರಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ಅಳವಡಿಸಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮುಖಾಂತರ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನೊಂದಿಗೆ ಸಮಾಲೋಚಿಸಿ ಯೋಜನೆ ಯನ್ನು ವಿಸ್ತರಿಸುವಂತೆ ಅಭಿಪ್ರಾಯ ನೀಡಿದೆ.

ಅದರಂತೆ ಕಾರ್ಯನಿರ್ವಾಹಕ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರು ಸಂಘದ ನೌಕರರಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ವಿಸ್ತರಿಸಲು ಷರತ್ತುಗಳಿಗೆ ಒಳಪಟ್ಟು ತಾತ್ವಿಕ ಒಪ್ಪಿಗೆ ನೀಡಿರುತ್ತದೆ. ಕಾರ್ಯನಿರ್ವಾಹಕ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರ ಕೋರಿಕೆಯಂತೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆ/ಕಾಲೇಜುಗಳ ಸಿಬ್ಬಂದಿಗಳು ಮತ್ತು ಅವರ ಅವಲಂಬಿತರ ಹೆಸರು, ವಯಸ್ಸು, ಆಧಾರ್, (Bio metric finger impression/IRIS) ವಿಳಾಸ ಇತ್ಯಾದಿ ವಿವರಗಳನ್ನು 'ಸಂಘದ ಹೆಚ್.ಆರ್.ಎಂ.ಎಸ್ ತಂತ್ರಾಂಶದಲ್ಲಿ ನಮೂದಿಸಲು ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿರುತ್ತದೆ.

ಆದರೆ ಪ್ರಸ್ತುತ ಲಭ್ಯವಿರುವ ಹೆಚ್.ಆರ್.ಎಮ್.ಎಸ್ ತಂತ್ರಾಂಶದಲ್ಲಿ 'ಮೇಲ್ಕಂಡ ಮಾಹಿತಿಯನ್ನು' ನಮೂದಿಸಲು ತಾಂತ್ರಿಕ ತೊಂದರೆಗಳು ಇರುವುದಾಗಿ ವಸತಿ ಶಾಲೆಗಳ ಪ್ರಾಂಶುಪಾಲರು ತಿಳಿಸಿರುತ್ತಾರೆ. ಈ ಹಿನ್ನಲೆಯಲ್ಲಿ ತಾಂತ್ರಿಕ ದೋಷವನ್ನು ಸರಿಪಡಿಸುವಂತೆ ಯೋಜನಾ ನಿರ್ದೇಶಕರು, ಹೆಚ್.ಆರ್.ಎಮ್.ಎಸ್. ಸೆಲ್ ರವರಿಗೆ ಈಗಾಗಲೇ ಪತ್ರ ಬರೆಯಲಾಗಿದೆ. ಈ ಸಂಬಂಧ ಯೋಜನಾ ನಿರ್ದೇಶಕರು, ಹೆಚ್.ಆರ್.ಎಮ್.ಎಸ್. ಸೆಲ್ ರವರನ್ನು ಭೇಟಿ ಮಾಡಿ ತಾಂತ್ರಿಕ ಸಮಸ್ಯೆಗಳನ್ನು ನಿವಾರಿಸುವ ಬಗ್ಗೆ ಚರ್ಚಿಸಲಾಗಿ, ಪ್ರಸ್ತುತ ಲಭ್ಯವಿರುವ ಹೆಚ್.ಆರ್.ಎಮ್.ಎಸ್ ತಂತ್ರಾಂಶದಲ್ಲಿ ತಾಂತ್ರಿಕ ನ್ಯೂನತೆಗಳನ್ನು ನಿವಾರಿಸಬೇಕಾದರೆ, ತಂತ್ರಾಂಶವನ್ನು ಉನ್ನತೀಕರಿಸುವುದು ಅವಶ್ಯವಿರುತ್ತದೆ. ತಂತ್ರಾಂಶವನ್ನು ಉನ್ನತೀಕರಿಸುವ ಪ್ರಕ್ರಿಯೆಗೆ ಸಮಯಾವಕಾಶದ ಅವಶ್ಯಕತೆ ಇರುವುದಾಗಿ ತಿಳಿಸಿರುತ್ತಾರೆ.

ಆದ್ದರಿಂದ ಹೆಚ್.ಆರ್.ಎಮ್.ಎಸ್. ಸೆಲ್ ವತಿಯಿಂದ ತಾಂತ್ರಿಕದೋಷ ಬಗೆಹರಿಯುವವರೆಗೆ ತಾತ್ಕಾಲಿಕವಾಗಿ ದೃಢೀಕೃತ ದಾಖಲೆಗಳ (Manual Documents) ಆಧಾರದ ಮೇಲೆ ಸಂಘದ ಸಿಬ್ಬಂದಿಗಳಿಗೆ ಯೋಜನೆಯನ್ನು ಪ್ರಾರಂಭಿಸಲು ಕಾರ್ಯನಿರ್ವಾಹಕ ನಿರ್ದೇಶಕರು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರಿಗೆ ಪತ್ರದ ಮೂಲಕ ಕೋರಲಾಗಿರುತ್ತದೆ.

ಕಾರ್ಯನಿರ್ವಾಹಕ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರು ಸಂಘದ ಖಾಯಂ ನೌಕರರು & ಅವರ ಅವಲಂಭಿತರಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ತಾತ್ಕಾಲಿಕವಾಗಿ ದೃಢೀಕೃತ ದಾಖಲೆಗಳ (Manual Documents) ಆಧಾರದ ಮೇಲೆ ವಿಸ್ತರಿಸಲು ಒಪ್ಪಿದಲ್ಲಿ, ಸಂಘದ ಖಾಯಂ ನೌಕರರಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ಅನುಷ್ಠಾನಗೊಳಿಸಲು ಮುಂದಿನ ಕ್ರಮವಹಿಸಲಾಗುವುದು.

**ಕಡತ ಸಂಖ್ಯೆ: ಸಕಇ 536 ಮೊದೇಶಾ 2021**

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು